# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 221
ಸದಸ್ಯರ ಹೆಸರು : ಶ್ರೀ ಎಂ.ಎ. ಗೋಪಾಲಸ್ವಾಮಿ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 11.07.2018
ಉತ್ತರಿಸುವ ಸಚಿವರು : ಕಂದಾಯ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಸರ್ಕಾರದ ಮಹತ್ತರವಾದ ಯೋಜನೆಗಳ ಅನುಷ್ಠಾನಕ್ಕೆ ಭೂ ಮಂಜೂರಾತಿಗಾಗಿ ಎಷ್ಟು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ; (ಭೂ ಮಂಜೂರಾತಿಗಾಗಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗಳ ವಿವರಗಳನ್ನು ಯೋಜನೆವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) | ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಸರ್ಕಾರದ ಮಹತ್ತರವಾದ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಭೂ ಮಂಜೂರಾತಿ ಕೋರಿ ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ. |
| ಆ) | ಭೂಮಿ ಮಂಜೂರಾತಿ ಮಾಡಲು ವಿಳಂಬವಾಗುತ್ತಿರುವುದರಿಂದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಭೂ ಮಂಜೂರಾತಿ ಮಾಡಲು ಸರ್ಕಾರ ಕಾಲಮಿತಿಯೇನಾದರೂ ವಿಧಿಸಿದೆಯೇ; ಹಾಗಿದ್ದಲ್ಲಿ, ಈಗಾಗಲೇ ಸಲ್ಲಿಸಿದ ಪ್ರಸ್ತಾವನೆಗಳಿಗೆ ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು; | ಅನ್ವಯಿಸುವುದಿಲ್ಲ. |
| ಇ) | ಸರ್ಕಾರಿ ಯೋಜನೆಗಳಿಗೆ ಭೂಮಿ ಮಂಜೂರು ಮಾಡಲು ನಿಗದಿಪಡಿಸಿರುವ ಮಾನದಂಡಗಳೇನು; ಹಾಗೂ ಮಂಜೂರಾತಿ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು? (ಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರನ್ವಯ ಸರ್ಕಾರದ ವಿವಿಧ ಉದ್ದೇಶಗಳಿಗಾಗಿ ಭೂ ಮಂಜೂರು ಮಾಡಲು ಅವಕಾಶವಿರುತ್ತದೆ. |

ಆರ್‌ಡಿ 23 ಎಲ್‌ಜಿಹೆಚ್ 2018

ಆರ್.ವಿ.ದೇಶಪಾಂಡೆ
ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.